**All India Radio: Bangalore**
**National Bulletin In Kannada**
**09.05.2025 / 19.35 hrs**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**<><*<><>*><>**

ಮುಖ್ಯಾಂಶಗಳು

**೧. ದಾಳಿಗೆ ಯತ್ನಿಸಿದ ಪಾಕಿಸ್ತಾನದ ೪೦೦ ಕ್ಕೂ ಹೆಚ್ಚು ಡ್ರೋನ್‌ಗಳನ್ನು ಹೊಡೆದುರುಳಿಸಿದ ಭಾರತೀಯ ಸೇನೆ**

**೨. ಯುದ್ಧ ಸನ್ನದ್ಧತೆ ಕುರಿತು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರಿಂದ ಉನ್ನತಮಟ್ಟದ ಸಭೆ**

**೩. ಭಾರತೀಯ ಸೇನೆಗೆ ಬೆಂಬಲವಾಗಿ ಪ್ರಾದೇಶಿಕ ಸೇನೆ ಬಳಸಲು ಸೇನಾ ಸಿಬ್ಬಂದಿ ಮುಖ್ಯಸ್ಥರಿಗೆ ಅಧಿಕಾರ**

**೪. ಆಹಾರ ಧಾನ್ಯ ಅಕ್ರಮ ದಾಸ್ತಾನು ವಿರುದ್ಧ ಕಠಿಣ ಕ್ರಮ - ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ**

**೫. ನೂತನ ಪೋಪ್ ಲಿಯೊ-೧೪ ಅವರಿಗೆ ಪ್ರಧಾನಿ ನರೇಂದ್ರ ಮೋದಿ ಅಭಿನಂದನೆ**

**<><*<><>*><>**

ಪಾಕಿಸ್ತಾನ ನಿನ್ನೆ ರಾತ್ರಿ ಸುಮಾರು ೪೦೦ ಡ್ರೋನ್‌ಗಳನ್ನು ಬಳಸಿಕೊಂಡು ಲೇಹ್‌ನಿಂದ ಸಿರ್‌ಕ್ರೀಕ್‌ವರೆಗಿನ ೩೬ ಸ್ಥಳಗಳಲ್ಲಿ ದಾಳಿ ನಡೆಸಲು ಪ್ರಯತ್ನಿಸಿತ್ತು. ಭಾರತೀಯ ಸಶಸ್ತ್ರ ಪಡೆಗಳು ಹಲವು ವಿಧಗಳಿಂದ ಈ ಡ್ರೋನ್‌ಗಳನ್ನು ಹೊಡೆದುರುಳಿಸಿದವು ಎಂದು ಭಾರತೀಯ ಸೇನೆಯ ಕರ್ನಲ್ ಸೋಫಿಯಾ ಖುರೇಷಿ ತಿಳಿಸಿದ್ದಾರೆ. ನವದೆಹಲಿಯಲ್ಲಿಂದು ನಡೆದ ವಿಶೇಷ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಮಿಲಿಟರಿ ಮೂಲಸೌಕರ್ಯವನ್ನು ಗುರಿಯಾಗಿಸುವ ಉದ್ದೇಶದಿಂದ ಪಾಕ್ ಸೇನೆಯು, ಭಾರತದ ಇಡೀ ಪಶ್ಚಿಮ ಗಡಿಯಲ್ಲಿ ಭಾರತೀಯ ವಾಯುಪ್ರದೇಶವನ್ನು ಹಲವಾರು ಬಾರಿ ಉಲ್ಲಂಘಿಸಿದೆ. ಅಲ್ಲದೇ, ನಿಯಂತ್ರಣ ರೇಖೆಯ ಉದ್ದಕ್ಕೂ ಭಾರೀ ಶಸ್ತ್ರಾಸ್ತ್ರಗಳಿಂದ ದಾಳಿ ನಡೆಸಿದೆ ಎಂದು ಹೇಳಿದರು.

**ಧ್ವನಿ: ಸೋಫಿಯಾ ( ೨೬ ಸೆಕೆಂಡ್ಸ್)**

ಡ್ರೋನ್‌ಗಳ ಅವಶೇಷಗಳನ್ನು ವಿಧಿವಿಜ್ಞಾನ ಪ್ರಯೋಗಾಲಯಕ್ಕೆ ಕಳುಹಿಸಲಾಗಿದೆ. ಆರಂಭಿಕ ಮಾಹಿತಿಯ ಪ್ರಕಾರ, ಅವು ಟರ್ಕಿಶ್ ಆಸಿಸ್‌ಗಾರ್ಡ್ ಸೊಂಗಾರ್ ಡ್ರೋನ್‌ಗಳಾಗಿವೆ ಎಂದು ಕರ್ನಲ್ ಸೋಫಿಯಾ ಖುರೇಷಿ ಮಾಹಿತಿ ನೀಡಿದರು. ಭಾರತೀಯ ವಾಯುಸೇನೆಯ ವಿಂಗ್ ಕಮಾಂಡರ್ ವ್ಯೋಮಿಕಾ ಸಿಂಗ್ ಮಾತನಾಡಿ, ಪಾಕಿಸ್ತಾನದ ದಾಳಿಗೆ ಪ್ರತಿಯಾಗಿ, ಭಾರತೀಯ ಸಶಸ್ತ್ರ ಡ್ರೋನ್‌ಗಳ ಮೂಲಕ ಪಾಕಿಸ್ತಾನದ ನಾಲ್ಕು ವಾಯು ರಕ್ಷಣಾ ಪ್ರದೇಶಗಳ ಮೇಲೆ ದಾಳಿ ನಡೆಸಲಾಯಿತು. ಡ್ರೋನ್‌ಗಳ ಮೂಲಕ ಪಾಕಿಸ್ತಾನದ ಒಂದು ಎಡಿ ರಾಡಾರ್ ಅನ್ನು ನಾಶಮಾಡಲಾಗಿದೆ ಎಂದು ವಿವರಿಸಿದರು.

**<><*<><>*><>**

ಪಾಕಿಸ್ತಾನವು ನಿನ್ನೆ ರಾತ್ರಿ ಡ್ರೋನ್‌ಗಳು ಮತ್ತು ಕ್ಷಿಪಣಿಗಳನ್ನು ಬಳಸಿ, ಭಾರತದ ಉತ್ತರ ಮತ್ತು ಪಶ್ಚಿಮ ನಗರಗಳನ್ನು ಗುರಿಯಾಗಿ ನಡೆಸಿದ ಎಲ್ಲಾ ದಾಳಿ ಪ್ರಯತ್ನಗಳನ್ನು ಭಾರತೀಯ ಸಶಸ್ತ್ರ ಪಡೆಗಳು ವಿಫಲಗೊಳಿಸಿವೆ. ಇಂಟಿಗ್ರೇಟೆಡ್ ಡಿಫೆನ್ಸ್ ಸ್ಟಾಫ್ ಪ್ರಧಾನ ಕಚೇರಿಯ ಪ್ರಕಾರ, ಪಾಕಿಸ್ತಾನವು ಜಮ್ಮು, ಪಠಾಣ್‌ಕೋಟ್ ಮತ್ತು ಉಧಮ್‌ಪುರದಲ್ಲಿರುವ ಸೇನಾ ಕೇಂದ್ರಗಳು ಮತ್ತು ಅಂತಾರಾಷ್ಟ್ರೀಯ ಗಡಿಯ ಸಮೀಪವಿರುವ ಸ್ಥಳಗಳನ್ನು ಗುರಿಯಾಗಿಸಿ ದಾಳಿ ನಡೆಸಲು ಪ್ರಯತ್ನಿಸಿತು. ಆದಾಗ್ಯೂ, ಭಾರತೀಯ ಸಶಸ್ತ್ರ ಪಡೆಗಳು ದಾಳಿಯನ್ನು ಯಶಸ್ವಿಯಾಗಿ ತಟಸ್ಥಗೊಳಿಸಿದವು ಮತ್ತು ಯಾವುದೇ ಜೀವಹಾನಿ ವರದಿಯಾಗಿಲ್ಲ. ಪಾಕಿಸ್ತಾನದಿಂದ ಎಂಟು ಕ್ಷಿಪಣಿಗಳನ್ನು ಜಮ್ಮು ಮತ್ತು ಕಾಶ್ಮೀರದ ಸತ್ವಾರಿ, ಸಾಂಬಾ, ಆರ್.ಎಸ್.ಪುರ ಮತ್ತು ಅರ್ನಿಯಾ ಕಡೆಗೆ ಗುರಿಯಾಗಿಸಿ ಉಡಾಯಿಸಲಾಗಿತ್ತು. ಎಲ್ಲಾ ಕ್ಷಿಪಣಿಗಳನ್ನು ವಾಯು ರಕ್ಷಣಾ ಘಟಕಗಳು ತಡೆದು ನಿರ್ಬಂಧಿಸಿದವು. ಇವು ಇಸ್ರೇಲ್ ಮೇಲೆ ಹಮಾಸ್ ಶೈಲಿಯ ದಾಳಿಯನ್ನು ನೆನಪಿಸುತ್ತವೆ. ಪಾಕಿಸ್ತಾನ ಸೇನೆಯು ಹಮಾಸ್ ಭಯೋತ್ಪಾದಕ ಸಂಘಟನೆಯಂತೆ ಕಾರ್ಯನಿರ್ವಹಿಸುತ್ತಿದೆ ಮತ್ತು ವರ್ತಿಸುತ್ತಿದೆ. ಇದೇ ವೇಳೆ, ಜಮ್ಮು ಮತ್ತು ಕಾಶ್ಮೀರದ ಸಾಂಬಾ ಜಿಲ್ಲೆಯ ಅಂತಾರಾಷ್ಟ್ರೀಯ ಗಡಿಯಲ್ಲಿ ಗಡಿ ಭದ್ರತಾ ಪಡೆಯು ನಿನ್ನೆ ರಾತ್ರಿ ಪ್ರಮುಖ ಒಳನುಸುಳುವಿಕೆ ಪ್ರಯತ್ನವನ್ನು ವಿಫಲಗೊಳಿಸಿದ್ದು, ಕನಿಷ್ಠ ಏಳು ಭಯೋತ್ಪಾದಕರನ್ನು ಹತ್ಯೆ ಮಾಡಿದೆ. ಧಂಧರ್ ಪೋಸ್ಟ್‌ನಲ್ಲಿ ಪಾಕ್ ರೇಂಜರ್‌ಗಳಿಂದ ಬಂದ ಗುಂಡಿನ ದಾಳಿಯಿಂದ ಈ ಒಳನುಸುಳುವಿಕೆ ಪ್ರಯತ್ನಕ್ಕೆ ಬೆಂಬಲ ಸಿಕ್ಕಿದೆ. ಭಾರತೀಯ ಪಡೆಗಳು ಪಾಕಿಸ್ತಾನದ ಧಂಧರ್ ಪೋಸ್ಟ್‌ಗೆ ವ್ಯಾಪಕ ಹಾನಿಯನ್ನುಂಟು ಮಾಡಿವೆ ಎಂದು ಬಿಎಸ್‌ಎಫ್ ಮೂಲಗಳು ತಿಳಿಸಿವೆ.

**<><*<><>*><>**

ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು ನವದೆಹಲಿಯಲ್ಲಿಂದು ಪಶ್ಚಿಮ ಗಡಿಯಲ್ಲಿನ ಭದ್ರತಾ ಪರಿಸ್ಥಿತಿ ಹಾಗೂ ಭಾರತೀಯ ಸಶಸ್ತ್ರ ಪಡೆಯ ಕಾರ್ಯಾಚರಣೆ ಸನ್ನದ್ಧತೆ ಕುರಿತಂತೆ

ಉನ್ನತಮಟ್ಟದ ಪರಿಶೀಲನಾ ಸಭೆ ನಡೆಸಿದರು. ಭಾರತೀಯ ರಕ್ಷಣಾ ಸಿಬ್ಬಂದಿ ಮುಖ್ಯಸ್ಥ ಜನರಲ್ ಅನಿಲ್ ಚೌಹಾಣ್, ಭಾರತೀಯ ಸೇನಾ ಮುಖ್ಯಸ್ಥ ಜನರಲ್ ಉಪೇಂದ್ರ ದ್ವಿವೇದಿ, ಭಾರತೀಯ ವಾಯುಪಡೆ ಮುಖ್ಯಸ್ಥ ಏರ್‌ಚೀಫ್ ಮಾರ್ಷಲ್ ಅಮರ್‌ಪ್ರೀತ್ ಸಿಂಗ್, ಭಾರತೀಯ ನೌಕಾಪಡೆ ಮುಖ್ಯಸ್ಥ ಅಡ್ಮಿರಲ್ ದಿನೇಶ್ ತ್ರಿಪಾಠಿ ಹಾಗೂ ರಕ್ಷಣಾ ಕಾರ್ಯದರ್ಶಿ ಆರ್.ಕೆ.ಸಿಂಗ್ ಸಭೆಯಲ್ಲಿ ಪಾಲ್ಗೊಂಡಿದ್ದರು. ಕೇಂದ್ರ ಗೃಹ ಸಚಿವ ಅಮಿತ್ ಶಾ ಕೂಡ ಗಡಿ ಭದ್ರತಾ ಪಡೆ, ಕೇಂದ್ರ ಕೈಗಾರಿಕಾ ಭದ್ರತಾ ಪಡೆ ಹಾಗೂ ನಾಗರಿಕಯಾನ ಭದ್ರತಾ ಕೇಂದ್ರಗಳ ಮುಖ್ಯಸ್ಥರೊಂದಿಗೆ ಇಂದು ಸಭೆ ನಡೆಸಿದರು.

<><*<><>*><>

ಭಾರತೀಯ ಸೈನ್ಯವನ್ನು ಬೆಂಬಲಿಸಲು ಮತ್ತು ಪೂರಕವಾಗಿ ಕೆಲಸ ಮಾಡಲು ಪ್ರಾದೇಶಿಕ ಸೇನೆಯ ಅಧಿಕಾರಿ ಮತ್ತು ಸಿಬ್ಬಂದಿಯನ್ನು ನೇಮಿಸುವ ಅಧಿಕಾರವನ್ನು ಕೇಂದ್ರ ಸರ್ಕಾರವು ಭಾರತೀಯ ಸೇನಾ ಸಿಬ್ಬಂದಿ ಮುಖ್ಯಸ್ಥರಿಗೆ ನೀಡಿದೆ. ೧೯೪೮ ರ ಪ್ರಾದೇಶಿಕ ಸೇನಾ ನಿಯಮದಡಿಯಲ್ಲಿ ಭಾರತೀಯ ಸೇನಾ ಮುಖ್ಯಸ್ಥರಿಗೆ ಈ ಅಧಿಕಾರ ನೀಡಲಾಗಿದೆ. ಗೆಜೆಟ್ ಅಧಿಸೂಚನೆಯಲ್ಲಿ, ರಕ್ಷಣಾ ಸಚಿವಾಲಯವು ದಕ್ಷಿಣ ಕಮಾಂಡ್, ಪೂರ್ವ ಕಮಾಂಡ್, ಪಶ್ಚಿಮ ಕಮಾಂಡ್, ಕೇಂದ್ರ ಕಮಾಂಡ್, ಉತ್ತರ ಕಮಾಂಡ್, ನೈಋತ್ಯ ಕಮಾಂಡ್, ಅಂಡಮಾನ್ ಮತ್ತು ನಿಕೋಬಾರ್ ಕಮಾಂಡ್ ಹಾಗೂ ಸೇನಾ ತರಬೇತಿ ಕಮಾಂಡ್‌ಗಳಲ್ಲಿ ಅಸ್ತಿತ್ವದಲ್ಲಿರುವ ೩೨ ಪ್ರಾದೇಶಿಕ ಸೇನೆಯ ಪದಾತಿ ದಳಗಳಲ್ಲಿ ೧೪ ಪದಾತಿ ದಳಗಳನ್ನು ಒಳಗೊಂಡಿದೆ. ಈ ಆದೇಶವು ೨೦೨೮ರ ಫೆಬ್ರವರಿ ೯ ರವರೆಗೆ ಮೂರು ವರ್ಷಗಳ ಕಾಲ ಜಾರಿಯಲ್ಲಿರುತ್ತದೆ.

<><*<><>*><>

ರಕ್ಷಣಾ ಕಾರ್ಯಾಚರಣೆ ಮತ್ತು ಭದ್ರತಾ ಪಡೆಗಳ ಚಲನೆ ಕುರಿತಂತೆ ಯಾವುದೇ ವ್ಯಕ್ತಿ, ಮಾಧ್ಯಮ ವಾಹಿನಿ, ಡಿಜಿಟಲ್ ವೇದಿಕೆ, ನೈಜಕಾಲದ ವರದಿ ಅಥವಾ ನೇರ ಪ್ರಸಾರಕ್ಕೆ ಮುಂದಾಗಬಾರದು ಎಂದು ಕೇಂದ್ರ ಸರ್ಕಾರ ಸೂಚಿಸಿದೆ. ಈ ರೀತಿಯ ಸೂಕ್ಷ್ಮ ಸಂವೇದನೆಯ ಮಾಹಿತಿಗಳು ಕಾರ್ಯಾಚರಣೆಯ ಪರಿಣಾಮಕ್ಕೆ ಅಡೆ-ತಡೆ ಉಂಟುಮಾಡಬಹುದು ಹಾಗೂ ಜೀವಿಗಳನ್ನು ಅಪಾಯಕ್ಕೆ ತಳ್ಳಬಹುದು ಎನ್ನುವ ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಈ ಹಿಂದಿನ ಸುತ್ತೋಲೆಯನ್ನು ರಕ್ಷಣಾ ಸಚಿವಾಲಯ ಸಾಮಾಜಿಕ ಮಾಧ್ಯಮದಲ್ಲಿ ಉಲ್ಲೇಖಿಸಿದೆ. ಕಾರ್ಗಿಲ್ ಯುದ್ಧ, ೨೬/೧೧ರ ಮುಂಬೈ ದಾಳಿ ಮತ್ತು ಕಂದಹಾರ್ ಅಪಹರಣ ಸಂದರ್ಭಗಳಲ್ಲಿ ವಿವೇಚನಾ ರಹಿತ ವರದಿಗಳು ಬಂದೊಡ್ಡಿದ ಅಪಾಯಗಳನ್ನು ಸಚಿವಾಲಯ ಉಲ್ಲೇಖಿಸಿದೆ.

<><*<><>*><>

ದೇಶದಲ್ಲಿ ಆಹಾರ ಧಾನ್ಯ ಸಂಗ್ರಹ ಸಾಕಷ್ಟಿದೆ ಎಂದು ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ತಿಳಿಸಿದ್ದಾರೆ. ನವದೆಹಲಿಯಲ್ಲಿ ಇಂದು ಮಾಧ್ಯಮಗಳಿಗೆ ಮಾಹಿತಿ ನೀಡಿದ ಸಚಿವರು, ಯಾವುದೇ ತುರ್ತು ಪರಿಸ್ಥಿತಿಯ ಸಮಯದಲ್ಲಿ ಶಾಂತವಾಗಿರುವಂತೆ ನಾಗರಿಕರಿಗೆ ಮನವಿ ಮಾಡಿದರು. ಕೃಷಿ ಉತ್ಪಾದನೆ ಅತ್ಯುತ್ತಮವಾಗಿದ್ದು, ಮುಂಬರುವ ಬೆಳೆಗಳಿಗೆ ವಾತಾವರಣ ಆಶಾದಾಯಕವಾಗಿದೆ ಎಂದು ಅವರು ಹೇಳಿದರು. ಇದೇ ವೇಳೆ, ಕೇಂದ್ರ ಗ್ರಾಹಕ ವ್ಯವಹಾರಗಳ ಸಚಿವ ಪ್ರಲ್ಹಾದ್ ಜೋಶಿ ಮಾತನಾಡಿ, ಅಗತ್ಯ ವಸ್ತುಗಳ ವ್ಯಾಪಾರದಲ್ಲಿ ತೊಡಗಿರುವ ವ್ಯಾಪಾರಿಗಳು, ಸಗಟು ವ್ಯಾಪಾರಿಗಳು, ಚಿಲ್ಲರೆ ವ್ಯಾಪಾರಿಗಳು ಮತ್ತು ವ್ಯಾಪಾರ ಸಂಸ್ಥೆಗಳು ಕಾನೂನು ಜಾರಿ ಸಂಸ್ಥೆಗಳೊಂದಿಗೆ ಸಹಕರಿಸುವಂತೆ ನಿರ್ದೇಶಿಸಲಾಗಿದೆ ಎಂದು ತಿಳಿಸಿದರು. ಆಹಾರ ಧಾನ್ಯಗಳನ್ನು ಅಕ್ರಮವಾಗಿ ದಾಸ್ತಾನು ಮಾಡುವವರ ವಿರುದ್ಧ ಕಾನೂನು ರೀತಿಯ ಕ್ರಮ ಜರುಗಿಸಲಾಗುವುದು ಎಂದು ಅವರು ಎಚ್ಚರಿಸಿದ್ದಾರೆ.

<><*<><>*><>

ದೆಹಲಿ ವಿಮಾನ ನಿಲ್ದಾಣದಲ್ಲಿ ಇಂದು ಒಟ್ಟು ೧೩೮ ವಿಮಾನಗಳ ಹಾರಾಟವನ್ನು ರದ್ದುಗೊಳಿಸಲಾಗಿದೆ. ಇದರಲ್ಲಿ ೯ ಅಂತಾರಾಷ್ಟ್ರೀಯ ವಿಮಾನಗಳು ಹಾಗೂ ೧೨೯ ದೇಶೀಯ ವಿಮಾನಗಳು ಸೇರಿವೆ.

<><*<><>*><>

ಅಮೆರಿಕದ ಕಾರ್ಡಿನಲ್ ಬಿಷಪ್ ರಾಬರ್ಟ್ ಫ್ರಾನ್ಸಿಸ್ ಪ್ರಿವೋಸ್ಟ್ ಅವರು ರೋಮನ್ ಕ್ಯಾಥೋಲಿಕ್ ಚರ್ಚ್‌ನ ನೂತನ ಪೋಪ್ ಆಗಿ ಆಯ್ಕೆ ಆಗಿದ್ದಾರೆ. ಕ್ಯಾಥೋಲಿಕ್ ಚರ್ಚ್‌ನ ಇತಿಹಾಸದಲ್ಲಿ ಇದೇ ಮೊದಲ ಬಾರಿಗೆ ಅಮೆರಿಕದ ಬಿಷಪ್ ಒಬ್ಬರು ಈ ಉನ್ನತ ಹುದ್ದೆಯನ್ನು ಅಲಂಕರಿಸಿದ್ದಾರೆ. ನೂತನ ಪೋಪ್ ಅವರನ್ನು ಇನ್ನು ಮುಂದೆ ಪೋಪ್ ಲಿಯೋ - ೧೪ ಎಂಬ ಹೆಸರಿನಿಂದ ಕರೆಯಲಾಗುವುದು. ಭಾರತದ ಜನತೆ ಪರವಾಗಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಪೋಪ್ ಲಿಯೊ-೧೪ ಅವರಿಗೆ ಶುಭಾಶಯ ಕೋರಿದ್ದಾರೆ. ಶಾಂತಿ, ಸಾಮರಸ್ಯ, ಐಕ್ಯಮತ್ಯ ಮತ್ತು ಸೇವೆಯ ಆದರ್ಶಗಳು ಅತ್ಯಂತ ಮಹತ್ವವಿರುವ ಈ ಸಂದರ್ಭದಲ್ಲಿ ಪೋಪ್ ಲಿಯೊ-೧೪ ಅವರು ಮುಂದಾಳತ್ವ ವಹಿಸುತ್ತಿದ್ದಾರೆ ಎಂದು ಪ್ರಧಾನಿ ಮೋದಿ ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದ್ದಾರೆ.

<><*<><>*><>

ವಿಶೇಷ ಎನ್‌ಐಎ ನ್ಯಾಯಾಲಯವು ಇಂದು, ೨೬/೧೧ ಮುಂಬೈ ಭಯೋತ್ಪಾದಕ ದಾಳಿಯ ಆರೋಪಿ ತಹವ್ವೂರ್ ರಾಣಾನನ್ನು ಜೂನ್ ೬ ರವರೆಗೆ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದೆ. ಇದಕ್ಕೂ ಮುನ್ನ, ಪಾಕಿಸ್ತಾನಿ-ಕೆನಡಾ ಪ್ರಜೆ ತಹವ್ವೂರ್ ರಾಣಾನ  ಧ್ವನಿ ಮತ್ತು ಕೈಬರಹದ ಮಾದರಿಗಳನ್ನು ಎನ್‌ಐಎ ಸಂಗ್ರಹಿಸಿದ್ದು, ಸಹ ಆರೋಪಿ ಡೇವಿಡ್ ಕೋಲ್ಮನ್ ಹೆಡ್ಲಿಯೊಂದಿಗಿನ ಆತನ ದೂರವಾಣಿ ಸಂಭಾಷಣೆಗಳ ರೆಕಾರ್ಡಿಂಗ್‌ಗಳೊಂದಿಗೆ ಅವುಗಳನ್ನು ಹೊಂದಿಸಲು ಪ್ರಯತ್ನಿಸಿದೆ.

<><*<><>*><>

ಭಾರತದ ಕ್ರಿಕೆಟ್ ನಿಯಂತ್ರಣಾ ಮಂಡಳಿ ಬಿಸಿಸಿಐ, ಐಪಿಎಲ್ ಕ್ರಿಕೆಟ್-೨೦೨೫ ರ ಉಳಿದ ಪಂದ್ಯಗಳನ್ನು ತಕ್ಷಣದಿಂದ ಜಾರಿಗೆ ಬರುವಂತೆ ಒಂದು ವಾರ ಕಾಲ ಸ್ಥಗಿತಗೊಳಿಸಿದೆ. ಭಾರತ-ಪಾಕಿಸ್ತಾನ ನಡುವಿನ ಉದ್ವಿಗ್ನ ಪರಿಸ್ಥಿತಿ ಹಿನ್ನೆಲೆಯಲ್ಲಿ ಐಪಿಎಲ್ ಆಡಳಿತ ಮಂಡಳಿ ಸಂಬಂಧಪಟ್ಟ ಪ್ರತಿನಿಧಿಗಳೊಂದಿಗೆ ಚರ್ಚೆ ನಡೆಸಿದ ನಂತರ ಈ ನಿರ್ಧಾರಕ್ಕೆ ಬಂದಿರುವುದಾಗಿ ತಿಳಿಸಿದೆ. ಸಮಗ್ರ ಪರಿಸ್ಥಿತಿ ಪರಾಮರ್ಶೆ ನಂತರ ಸಂಬಂಧಪಟ್ಟವರ ಜೊತೆ ಸಮಾಲೋಚನೆ ನಡೆಸಿ, ಮುಂದಿನ ಪರಿಷ್ಕೃತ ವೇಳಾಪಟ್ಟಿ ಹಾಗೂ ಸ್ಥಳಗಳ ಬಗ್ಗೆ ಪ್ರಕಟಿಸಲಾಗುವುದು ಎಂದು ಬಿಸಿಸಿಐ ತಿಳಿಸಿದೆ.

<><*<><>*><>

ದೇಶ ಕಂಡ ಅಪ್ರತಿಮ ಸೇನಾನಿ ಮಹಾರಾಣಾ ಪ್ರತಾಪ್ ಅವರ ಜನ್ಮದಿನದಂದು ಅವರಿಗೆ ಪ್ರಧಾನಿ ನರೇಂದ್ರ ಮೋದಿ ಗೌರವ ನಮನ ಸಲ್ಲಿಸಿದ್ದಾರೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೩೫ ಕ್ಕೆ <>*><>**